ಕಾರ್ಯದರ್ಶಿಗಳು ಮತ್ತು ಖಜಾಂಚಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, 'ಶಿಕ್ಷಕರಸದನ' ಕೆಂಪೇಗೌಡ ರಸ್ತೆ, ಬೆಂಗಳೂರು-560002.

ಸಂಖ್ಯೆ: ಲೆಕ್ಕ5/ಅ.ಜೀ.ಸ.ನೋ./02/2022-23 ದಿನಾಂಕ: 31.03.2023

## ಸುತ್ತೋಲೆ

ವಿಷಯ: ಆಜೀವ ಸದಸ್ಯತ್ವದ ಗುರುತಿನ ಚೀಟಿಗಳನ್ನು ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಳ್ಳುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಲೆಕ್ಕ5/ಅ.ಜೀ.ಸ.ನೋ./02/2022-23 ದಿನಾಂಕ: 14.10.2022

******

ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಕಛೇರಿ ವತಿಯಿಂದ ಒದಗಿಸಲಾಗುತ್ತಿರುವ ಎಲ್ಲಾ ಸೌಲಭ್ಯಗಳನ್ನು Online ಸೇವೆಗೆ ಒಳಪಡಿಸಲಾಗಿದ್ದು, Online ನೋಂದಣಿ ಕಾರ್ಯವನ್ನು ದಿನಾಂಕ: 13.10.2022ರಿಂದ ಲೋಕಾರ್ಪಣೆಗೊಳಿಸಲಾಗಿದ್ದು, ಈ ಸಂಬಂಧ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಮ್ಮ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಶಾಲಾ ಶಿಕ್ಷಕರಿಗೆ, ಈಗಾಗಲೇ ನಿಧಿಯ ಸದಸ್ಯತ್ವ ಪಡೆದು ಆಜೀವ ಸದಸ್ಯತ್ವ ಕಾರ್ಡ್ ಪಡೆದಿದ್ದಲ್ಲಿ ಯಾವುದೇ ಶುಲ್ಕವಿಲ್ಲದೆ Onlineನಲ್ಲಿ ನೋಂದಣಿ ಮಾಡಿಕೊಂಡು ಹೊಸ ನೋಂದಣಿ ಸಂಖ್ಯೆಯೊಂದಿಗೆ ಕಾರ್ಡ್ ಆನ್‌ಲೈನ್‌ನಲ್ಲಿ ಪಡೆಯುವಂತೆ ಹಾಗೂ ಇದುವರೆವಿಗೂ ಶಿಕ್ಷಕರ ಕಲ್ಯಾಣ ನಿಧಿ ಕಛೇರಿಯಲ್ಲಿ ಆಜೀವ ಸದಸ್ಯತ್ವ ಪಡೆಯದಿರುವ ಶಿಕ್ಷಕರಿಗೆ ಕಡ್ಡಾಯವಾಗಿ Online ಮೂಲಕ ನಿಧಿಯಲ್ಲಿ ಸದಸ್ಯತ್ವ ಪಡೆಯುವಂತೆ ಸೂಚಿಸಲು ತಿಳಿಸಲಾಗಿತ್ತು, ಆದರೆ ಇದುವರೆವಿಗೂ ತುಂಬಾ ಕಡಿಮೆ ಸಂಖ್ಯೆಯಲ್ಲಿ ಶಿಕ್ಷಕರು ಆನ್‌ಲೈನ್‌ನಲ್ಲಿ ಆಜೀವ ಸದಸ್ಯತ್ವ ನೋಂದಣಿ ಪಡೆದಿರುತ್ತಾರೆ.

ರಾಜ್ಯದ ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು, ಪದವಿ ಕಾಲೇಜು, ಸ್ನಾತಕೋತ್ತರ ಪದವಿ ಕಾಲೇಜು, ವಿಶ್ವವಿದ್ಯಾನಿಲಯಗಳು, ಎಲ್ಲ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಶಾಲಾ ಶಿಕ್ಷಕರು/ಉಪನ್ಯಾಸಕರನ್ನು ಕಡ್ಡಾಯವಾಗಿ ಆಜೀವ ಸದಸ್ಯತ್ವ Online ನೋಂದಣಿ ಪಡೆದುಕೊಳ್ಳಲು ಹಾಗೂ ಇದುವರೆವಿಗೂ ಶಿಕ್ಷಕರ ಕಲ್ಯಾಣ ನಿಧಿ ಕಛೇರಿಯಲ್ಲಿ ಆಜೀವ ಸದಸ್ಯತ್ವ ಪಡೆಯದಿರುವ ಶಿಕ್ಷಕರಿಗೆ/ಉಪನ್ಯಾಸಕರಿಗೆ ಕಡ್ಡಾಯವಾಗಿ Online ಮೂಲಕ ನಿಧಿಯಲ್ಲಿ ಸದಸ್ಯತ್ವ ಪಡೆಯುವ ಸಂಬಂಧ ಸೂಕ್ತ ಮಾರ್ಗದರ್ಶನ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ಆಜೀವ ಸದಸ್ಯತ್ವ ಪಡೆಯಲು ಕ್ರಮವಹಿಸುವುದು.

ಆಯುಕ್ತರು ಹಾಗೂ ಪದನಿಮಿತ್ತ ಕಾರ್ಯದರ್ಶಿ/ಖಜಾಂಚಿಗಳು
ರಾ.ಶಿ.ಕ.ಪ್ರ, ಕ.ರಾ.ವಿ.ಕ್ಷೇ.ನಿ, ಹಾಗೂ ಕ.ರಾ.ಶಿ.ಕ.ನಿ
ಶಿಕ್ಷಕರ ಸದನ, ಕೆ. ಜಿ ರಸ್ತೆ, ಬೆಂಗಳೂರು.

ಇವರಿಗೆ,

1. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ, ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.